ಆ) ಈ ಸಮಸ್ಯೆಯನ್ನು ಬಗೆಹರಿಸಲು ತುರ್ತು ಕ್ರಮ ಕೈಗೊಳ್ಳುವ ಯೋಜನೆ ಸರಕಾರದವರ ಮುಂದಿದೆಯೆ ?

ಶ್ರೀ ಹೆಚ್. ಡಿ. ದೇವೇಗೌಡ, (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು).—

ಆ) ಸೇತುವೆಯು ಕುಸಿದಿಲ್ಲ. ಈ ಸೇತುವೆಯು ಸುಮಾರು ಐವತ್ತು ವರ್ಷಕ್ಕಿಂತಲೂ ಹಳೆಯದಾಗಿದ್ದು ಜೀರ್ಣಾವಸ್ಥೆಯಲ್ಲಿ ಇರುವುದರಿಂದ ವಾಹನ ಸಂಚಾರವನ್ನು ನಿಯಂತ್ರಿಸಲಾಗಿದೆ.

ಆ) ಈ ಸೇತುವೆ ನಿರ್ಮಾಣವನ್ನು ಹಣಕಾಸಿನ ಲಭ್ಯತೆಯನ್ನಾಧರಿಸಿ, ಆದ್ಯತೆಗಳಿಗನುಗುಣವಾಗಿ ಬರುವ ವರ್ಷಗಳಲ್ಲಿ ತೆಗೆದುಕೊಳ್ಳುವುದನ್ನು ಪರಿಶೀಲಿಸಲಾಗುವುದು.

ಡಿ. ಎಫ್. ಜಿ. ಭದ್ರಾವತಿ ಇವರು ಕಳುಹಿಸಿರುವ ಅಸಮರ್ಥ ಸರಕಾರಿ ನೌಕರರನ್ನು ಕೆಲಸದಿಂದ ತೆಗೆಯಲು ಕಳುಹಿಸಿರುವ ಪಟ್ಟಿಯ ಬಗ್ಗೆ.

೨೭೨. ಶ್ರೀ ಬಿ. ಎಸ್. ಯಡಿಯೂರಪ್ಪ (ಶಿಕಾರಿಪುರ).— ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಭದ್ರಾವತಿ ವಿಭಾಗದ ಅರಣ್ಯಾಧಿಕಾರಿಗಳ ಕಛೇರಿಯಿಂದ ಅಸಮರ್ಥ ಅಧಿಕಾರಿಗಳನ್ನು ಸರ್ಕಾರಿ ಸುತ್ತೋಲೆಯ ಮೇರೆಗೆ ಕಡ್ಡಾಯವಾಗಿ ನಿವೃತ್ತಿಗೊಳಿಸಲು ಹೆಸರನ್ನು ಸೂಚಿಸಿ ಪಟ್ಟಿ ಬಂದಿದೆಯೆ ?

ಆ) ಹಾಗಿದ್ದಲ್ಲಿ ಈ ರೀತಿ ಕಳಿಸಿರುವ ಸುತ್ತೋಲೆಯಲ್ಲಿ ಜಿಲ್ಲಾ ಅರಣ್ಯಾಧಿಕಾರಿಯವರು ವೈಯುಕ್ತಿಕ ದ್ವೇಷದಿಂದ ಕೆಲವು ಅಧಿಕಾರಿಗಳ ಹೆಸರನ್ನು ಶಿಫಾರಸ್ಸು ಮಾಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಆ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮವೇನು ?

ಶ್ರೀ ಬಿ. ವಿ. ಜೀವಿಜಯ, (ಮಾನ್ಯ ಅರಣ್ಯ ಸಚಿವರು).—

ಅ) ಇಲ್ಲ. ಸರ್ಕಾರದ ಆದೇಶ ಸಂಖ್ಯೆ. ಡಿಪಿಎಆರ್ ೧೨ ಎಸ್‌ಡಿಇ ೮೫ ದಿನಾಂಕ ೨೪-೫-೮೫ರ ಅನುಸಾರವಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಭದ್ರಾವತಿ ವಿಭಾಗ ಇವರು ೨೫ ವರ್ಷ ಅರ್ಹತಾದಾಯಕ ಸೇವೆಯನ್ನು ಸಲ್ಲಿಸಿದವರ ಅಥವಾ ೫೦ ವರ್ಷ ತುಂಬಿದ ಸರ್ಕಾರಿ ನೌಕರರ ಪಟ್ಟಿಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಾಮಾನ್ಯ), ಅವರಿಗೆ ಕಳುಹಿಸಿರುತ್ತಾರೆ.

ಆ) ಇಲ್ಲ.

ಇ) ಈ ಪ್ರಶ್ನೆಯು ಉದ್ಭವಿಸುವುದಿಲ್ಲ.

ಹೊನ್ನಾಳಿ ತಾಲ್ಲೂಕಿನ ಜೀವನಹಳ್ಳಿಯಲ್ಲೊಂದು ಸಾರ್ವಜನಿಕ ವಿದ್ಯಾರ್ಥಿ ನಿಲಯ ತೆರೆಯುವ ಬಗ್ಗೆ.

೨೩೦. ಶ್ರೀ ಡಿ. ಜಿ. ಬಸವನಗೌಡ (ಹೊನ್ನಾಳಿ).— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹೊನ್ನಾಳಿ ತಾಲ್ಲೂಕು ಜೀವನಹಳ್ಳಿಯಲ್ಲೊಂದು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಸಾರ್ವಜನಿಕರ ವಿದ್ಯಾರ್ಥಿ ನಿಲಯವನ್ನು ತೆಗೆಯುವ ಆಲೋಚನೆ ಸರ್ಕಾರದವರಿಗೆ ಇದೆಯೆ?

ಆ) ಹಾಗಿದ್ದಲ್ಲಿ, ೧೯೮೬-೮೭ನೇ ಸಾಲಿನಿಂದಾದರೂ ಪ್ರಾರಂಭಿಸುವ ಯೋಜನೆ ಸರ್ಕಾರದ ಪರಿಗಿದೆಯೆ ?

ಶ್ರೀ ವಿ. ಎಲ್. ಪಾಟೀಲ್, (ಸಮಾಜ ಕಲ್ಯಾಣ ಸಚಿವರು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.